**ಗುಲಬರ್ಗಾ ವಿಶ್ವವಿದ್ಯಾಲಯ**
ಜ್ಞಾನ ಗಂಗಾ, ಕಲಬುರಗಿ-585 106, ಕರ್ನಾಟಕ

ದೂರವಾಣಿ ಸಂ.: 08472-263202
ಫ್ಯಾಕ್ಸ್: 08472-263206
ಇ-ಮೇಲ್: **registrargug@rediffmail.com**

ಕ್ರ.ಸಂ. ಗುವಿಕ/ಆಡಳಿತ/2017-18/61 ದಿನಾಂಕ: 10.09.2017

**ಸುತ್ತೋಲೆ**

ವಿಷಯ: ಗುಲಬರ್ಗಾ ವಿಶ್ವವಿದ್ಯಾಲಯದ ಸಂಸ್ಥಾಪನಾ ದಿನಾಚರಣೆಯ ಅಂಗವಾಗಿ ದಿನಾಂಕ 11.09.2017 ರಿಂದ 13.09.2017ರ ವರೆಗೆ ಜರುಗಲಿರುವ **"ಗುಲಬರ್ಗಾ ವಿಶ್ವವಿದ್ಯಾಲಯ ವಸ್ತು ಪ್ರದರ್ಶನ-2017"**ರ ಕುರಿತು.

--

ಗುಲಬರ್ಗಾ ವಿಶ್ವವಿದ್ಯಾಲಯವು ದಿನಾಂಕ 11.09.2017 ರಂದು 38ನೇ ಸಂಸ್ಥಾಪನಾ ದಿನಾಚರಣೆಯನ್ನು ಆಚರಿಸುತ್ತಿರುವ ಹಿನ್ನೆಲೆಯಲ್ಲಿ ವಿಶ್ವವಿದ್ಯಾಲಯದಲ್ಲಿ ದಿನಾಂಕ 11.09.2017 ರಿಂದ 13.09.2017 ರವರೆಗಿನ ಮೂರು ದಿನಗಳ ಕಾಲ **"ಗುಲಬರ್ಗಾ ವಿಶ್ವವಿದ್ಯಾಲಯ ವಸ್ತು ಪ್ರದರ್ಶನ-2017"** ವಿಶ್ವವಿದ್ಯಾಲಯದ ಮುಖ್ಯ ಆವರಣದಲ್ಲಿ ಹಮ್ಮಿಕೊಂಡಿದ್ದು, ವಿಶ್ವವಿದ್ಯಾಲಯದ ಎಲ್ಲಾ ಅಧ್ಯಯನ ವಿಭಾಗಗಳಲ್ಲಿ ಇತ್ತೀಚಿನ ಸಂಶೋಧನೆಗಳ ಕುರಿತು ವಸ್ತು ಪ್ರದರ್ಶನವನ್ನು ಆಯೋಜಿಸಲಾಗಿದೆ. ಸದರಿ ವಸ್ತುಪ್ರದರ್ಶನವು ಬೆಳಿಗ್ಗೆ 10.00 ರಿಂದ ಸಾಯಂಕಾಲ 5.00 ಗಂಟೆಯವರೆಗೆ ವೀಕ್ಷಣೆಗಾಗಿ ಲಭ್ಯವಿರುತ್ತದೆ. ವಿಶ್ವವಿದ್ಯಾಲಯದ ಅಧೀನದಲ್ಲಿ ಬರುವ ಎಲ್ಲಾ ಮಹಾವಿದ್ಯಾಲಯಗಳ ಪ್ರಾಂಶುಪಾಲರು ತಮ್ಮ ಮಹಾವಿದ್ಯಾಲಯದ ವಿದ್ಯಾರ್ಥಿಗಳಿಗೆ ಈ ವಸ್ತುಪ್ರದರ್ಶನದ ಸದುಪಯೋಗವನ್ನು ಪಡೆಯಲು ತಿಳಿಸುವಂತೆ ಈ ಮೂಲಕ ಕೋರಲಾಗಿದೆ.

ಕುಲಸಚಿವರು
ಗುಲಬರ್ಗಾ ವಿಶ್ವವಿದ್ಯಾಲಯ, ಕಲಬುರಗಿ

ಗೆ,
ವಿಶ್ವವಿದ್ಯಾಲಯದ ಆಧೀನದಲ್ಲಿ ಬರುವ ಎಲ್ಲಾ ಮಹಾವಿದ್ಯಾಲಯಗಳ ಪ್ರಾಂಶುಪಾಲರಿಗೆ.

letter (Reg)